146ನೇ ಅಧಿವೇಶನ
ನಿ-72
ಕ್ರ.34
ಕಂಪ್ಯೂಟರ್

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಯು.ಬಿ. ವೆಂಕಟೇಶ್ ಇವರು ನಿಯಮ 72ರಡಿಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಹೇಳಿಕೆ.

ವಿಷಯ:- ರಾಜ್ಯದಲ್ಲಿ 2021-22 ಮತ್ತು 2022-23ನೇ ಸಾಲಿನ ಶೈಕ್ಷಣಿಕ ಅವಧಿಯಲ್ಲಿ ಹೊಸದಾಗಿ ಪ್ರಾರಂಭವಾಗುತ್ತಿರುವ ಖಾಸಗಿ ವೈದ್ಯಕೀಯ ಶಿಕ್ಷಣ ಕಾಲೇಜುಗಳು ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ನೀಡಿರುವ ತಪಾಸಣಾ ವರದಿಯಲ್ಲಿನ ಲೋಪದೋಷಗಳ ಬಗ್ಗೆ.

********

ಉತ್ತರ:-

ರಾಜ್ಯದಲ್ಲಿ 2021-22 ಮತ್ತು 2022-23ನೇ ಸಾಲಿನ ಶೈಕ್ಷಣಿಕ ಅವಧಿಯಲ್ಲಿ ಹೊಸದಾಗಿ ಪ್ರಾರಂಭವಾಗುತ್ತಿರುವ ಖಾಸಗಿ ವೈದ್ಯಕೀಯ ಶಿಕ್ಷಣ ಕಾಲೇಜುಗಳ ವಿವರ/ಮಾಹಿತಿಯನ್ನು ಈ ಕೆಳಕಂಡಂತೆ ಒದಗಿಸಲಾಗಿದೆ.

| ಕ್ರ.ಸಂ | ಹೊಸ ಖಾಸಗಿ ವೈದ್ಯಕೀಯ ಕಾಲೇಜಿನ ಹೆಸರು | ಶೈಕ್ಷಣಿಕ ವರ್ಷ |
|---|---|---|
| 1 | ಶ್ರೀ ಜಗದ್ಗುರು ಗಂಗಾಧರ ಮಹಾಸ್ವಾಮಿಗಳು ಮೂರುಸಾವಿರಮಠ ವೈದ್ಯಕೀಯ ಕಾಲೇಜು (JGMMC), ಹುಬ್ಬಳ್ಳಿ. | 2021-22 |
| 2 | ಜಿ.ಆರ್. ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ಮಂಗಳೂರು. | 2021-22 |
| 3 | ಸಿದ್ದಗಂಗಾ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ತುಮಕೂರು. | 2022-23 |
| 4 | ಶ್ರೀ ಚಾಮುಂಡೇಶ್ವರಿ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. | 2022-23 |

ಶ್ರೀ ಜಗದ್ಗುರು ಗಂಗಾಧರ ಮಹಾಸ್ವಾಮಿಗಳು ಮೂರುಸಾವಿರಮಠ ವೈದ್ಯಕೀಯ ಕಾಲೇಜು (JGMMC), ಹುಬ್ಬಳ್ಳಿ ಇಲ್ಲಿ ಪ್ರಾರಂಭಿಸಲು ಅವಶ್ಯವಿರುವ ಮೂಲಭೂತ ಸೌಕರ್ಯಗಳು, ಬೋಧನಾ ಸಿಬ್ಬಂದಿ ಹಾಗೂ ಕ್ಲಿನಿಕಲ್ ಸೌಲಭ್ಯದ ಬಗ್ಗೆ ಅಧಿಕಾರಿಗಳನ್ನೊಳಗೊಂಡ ಪರಿಶೀಲನಾ ತಂಡವು ವರದಿಯನ್ನು ನೀಡಿರುತ್ತದೆ. ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಕೆ.ಎಲ್.ಇ. ಅಕಾಡೆಮಿ ಆಫ್ ಹೈಯರ್ ಎಜ್ಯುಕೇಷನ್ ಅಂಡ್ ರಿಸರ್ಚ್(ಡೀಮ್ಡ್ ವಿಶ್ವವಿದ್ಯಾಲಯ) ಸಂಸ್ಥೆಯಿಂದ Consent of Affiliationನ್ನು ನೀಡಲಾಗಿರುತ್ತದೆ. ರಾಷ್ಟ್ರೀಯ ವೈದ್ಯಕೀಯ ಆಯೋಗಕ್ಕೆ ಸದರಿ ಕಾಲೇಜನ್ನು ಪ್ರಾರಂಭಿಸಲು ಅನುಮತಿಗಾಗಿ ಅರ್ಜಿಯನ್ನು ಸಲ್ಲಿಸಲಾಗಿತ್ತು. ತದನಂತರ ರಾಷ್ಟ್ರೀಯ ವೈದ್ಯಕೀಯ ಆಯೋಗದವರು ಸ್ವತಂತ್ರವಾಗಿ ಕಾಲೇಜಿನ ತಪಾಸಣೆಯನ್ನು ನಡೆಸಿದ್ದು, 2021-22ನೇ ಸಾಲಿನಿಂದ ಪ್ರಾರಂಭಿಸಲು ಅನುಮತಿಯನ್ನು ನೀಡಿರುತ್ತಾರೆ.

ಜಿ.ಆರ್.ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ 2021-22ನೇ ಸಾಲಿನಲ್ಲಿ Consent of Affiliationನ್ನು ನೀಡಲಾಗಿರುತ್ತದೆ. ರಾಷ್ಟ್ರೀಯ ವೈದ್ಯಕೀಯ ಆಯೋಗಕ್ಕೆ ಸದರಿ ಕಾಲೇಜನ್ನು ಪ್ರಾರಂಭಿಸಲು ಅನುಮತಿಗಾಗಿ ಅರ್ಜಿಯನ್ನು ಸಲ್ಲಿಸಲಾಗಿತ್ತು. ತದನಂತರ ರಾಷ್ಟ್ರೀಯ ವೈದ್ಯಕೀಯ ಆಯೋಗದವರು ಸ್ವತಂತ್ರವಾಗಿ ಕಾಲೇಜಿನ ತಪಾಸಣೆಯನ್ನು ನಡೆಸಿದ್ದು, 2021-22ನೇ ಸಾಲಿನಿಂದ ಪ್ರಾರಂಭಿಸಲು ಅನುಮತಿಯನ್ನು ನೀಡಿರುತ್ತಾರೆ.

ಸಿದ್ದಗಂಗಾ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ತುಮಕೂರು ಹಾಗೂ ಶ್ರೀ ಚಾಮುಂಡೇಶ್ವರಿ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ಚನ್ನಪಟ್ಟಣ ತಾ. ರಾಮನಗರ ಈ ಎರಡೂ ಕಾಲೇಜುಗಳಿಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ 2022-23ನೇ ಸಾಲಿಗೆ Consent of Affiliation ನೀಡಿದ್ದು, ರಾಷ್ಟ್ರೀಯ ವೈದ್ಯಕೀಯ ಆಯೋಗದ ಅನುಮತಿ ಬಾಕಿ ಇರುತ್ತದೆ.

**ಸಂಖ್ಯೆ:ಎಂಇಡಿ 19 ಆರ್‌ಜಿಯು 2022.**

**(ಡಾ:ಕೆ.ಸುಧಾಕರ್)**
ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ
ಮತ್ತು ಕುಟುಂಬ ಕಲ್ಯಾಣ ಸಚಿವರು

**RGUHS/AC2-ADM/LCQ/2021-22** **16.02.2022**

ಇವರಿಗೆ,

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,

ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ

ಬಹುಮಹಡಿ ಕಟ್ಟಡ, ಬೆಂಗಳೂರು - 560 001

ಮಾನ್ಯರೇ,

ವಿಷಯ: ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಯು ಬಿ ವೆಂಕಟೇಶ್ ರವರ ಗಮನ ಸೆಳೆಯುವ ಸೂಚನೆ.

ಉಲ್ಲೇಖ: ಕರ್ನಾಟಕ ವಿಧಾನ ಪರಿಷತ್ತು ಕಛೇರಿಯ ಪತ್ರ ದ ಸಂಖ್ಯೆ: ಕವಿಪ/ಪ್ರಶಾ/34/146ನೇಅ/ನಿ-72/2022 ದಿನಾಂಕ: 11.02.2022

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಿಧಾನ ಪರಿಷತ್ತಿನ ಸದಸ್ಯರಾದ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಯು ಬಿ ವೆಂಕಟೇಶ್ ರವರ ಗಮನ ಸೆಳೆಯುವ ಸೂಚನೆ ಕೆಳಕಂಡಂತೆ ಇದೆ.

| |
|---|
| ರಾಜ್ಯದಲ್ಲಿ 2021-22 ಮತ್ತು 2022-23 ನೇ ಸಾಲಿನ ಶೈಕ್ಷಣಿಕ ಅವಧಿಯಲ್ಲಿ ಹೊಸದಾಗಿ ಪ್ರಾರಂಭವಾಗುತ್ತಿರುವ ಖಾಸಗಿ ವೈದ್ಯಕೀಯ ಶಿಕ್ಷಣ ಕಾಲೇಜುಗಳು (ಇವುಗಳು) ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ನೀಡಿರುವ ತಪಾಸಣಾ ವರದಿಯಲ್ಲಿನ ಲೋಪದೋಷಗಳ ಬಗ್ಗೆ (ನಿಯಮ 72ರ ಅಡಿಯಲ್ಲಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಮಂತ್ರಿಗಳ ಗಮನ ಸೆಳೆಯಬಯಸುತ್ತೇನೆ |

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಕಾಲೇಜುಗಳ ಮಾಹಿತಿ/ವಿವರವನ್ನು ಕೆಳಕಂಡಂತೆ ಒದಗಿಸಲಾಗಿದೆ

| ಕ್ರ.ಸಂ. | ಹೊಸ ಖಾಸಗೀ ವೈದ್ಯಕೀಯ ಕಾಲೇಜು | ಶೈಕ್ಷಣಿಕ ವರ್ಷ |
|---|---|---|
| 01 | ಜಿ.ಆರ್.ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ಮಂಗಳೂರು | 2021-22 |
| 02 | ಸಿದ್ಧಗಂಗಾ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ತುಮಕೂರು | 2022-23 |
| 03 | ಶ್ರೀ ಚಾಮುಂಡೇಶ್ವರಿ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ಚೆನ್ನಪಟ್ಟಣ ತಾ. ರಾಮನಗರ | 2022-23 |

ಕ್ರಮ ಸಂಖ್ಯೆ 01 ರಲ್ಲಿ ತಿಳಿಸಿರುವ ಜಿ.ಆರ್.ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ 2021-22 ರಲ್ಲಿ **Consent of Affiliation** ನೀಡಿದ್ದು, ಸದರಿ ಕಾಲೇಜು ನ್ಯಾಷನಲ್ ಮೆಡಿಕಲ್ ಕಮೀಷನ್ ಇವರಿಗೆ ಅನುಮತಿಗಾಗಿ ಅರ್ಜಿಸಲ್ಲಿಸಿ, ನಂತರ ನ್ಯಾಷನಲ್ ಮೆಡಿಕಲ್ ಕಮೀಷನ್‌ರವರು ಸ್ವತಂತ್ರವಾಗಿ ಕಾಲೇಜಿನ ತಪಾಸಣೆ ನಡೆಸಿ ಸದರಿ ಕಾಲೇಜು 2021-22ರಿಂದ ಆರಂಭಗೊಳಿಸಲು ಅನುಮತಿಯನ್ನು ನೀಡಿರುತ್ತಾರೆ.

ಕ್ರಮ ಸಂಖ್ಯೆ 02 ಮತ್ತು 03 ರಲ್ಲಿ ತಿಳಿಸಿರುವ ಸಿದ್ಧಗಂಗಾ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ತುಮಕೂರು ಹಾಗೂ ಶ್ರೀ ಚಾಮುಂಡೇಶ್ವರಿ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ಚೆನ್ನಪಟ್ಟಣ ತಾ. ರಾಮನಗರ ಈ ಎರಡೂ ಕಾಲೇಜುಗಳಿಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ 2022-23 ನೇ ಸಾಲಿಗೆ ಅನುಮತಿ **Consent of Affiliation** ನೀಡಿದ್ದು, ನ್ಯಾಷನಲ್ ಮೆಡಿಕಲ್ ಕಮೀಷನ್ ರವರ ಅನುಮತಿ ಬಾಕಿ ಇರುತ್ತದೆ.

ಡೀಮ್ಡ್ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ವೈದ್ಯಕೀಯ ಕಾಲೇಜುಗಳ ಮಾಹಿತಿಯನ್ನು ವೈದ್ಯಕಿಯ ಶಿಕ್ಷಣ ನಿರ್ದೇಶನಾಲಯ (DME) ಯಿಂದ ಪಡೆಯಬಹುದು

ತಮ್ಮ ವಿಶ್ವಾಸಿ

ಕುಲಸಚಿವರು

ಪ್ರತಿ:

ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು